# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 594
2. ಸದಸ್ಯರ ಹೆಸರು : ಶ್ರೀ ಜಗದೇವ್ ಗುತ್ತೇದಾರ್,
3. ಉತ್ತರಿಸಬೇಕಾದ ದಿನಾಂಕ :14.08.2025.
4. ಉತ್ತರಿಸುವ ಸಚಿವರು : ಮಾನ್ಯ ಸಣ್ಣ ನೀರಾವರಿ, ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ತೇಲುವ ಸೋಲಾರ್ ಫಲಕ ಮೂಲಕ ಸೌರ ವಿದ್ಯುತ್ ಸಾಮರ್ಥ್ಯವನ್ನು ಹೆಚ್ಚಿಸಿ ಆದಾಯ ಮೂಲವಾಗಿ ಕೆರೆಗಳ ಬಳಕೆ ಮಾಡುವ ಯೋಜನೆ ಸರ್ಕಾರದ ಮುಂದೆ ಇದೆಯೇ; | ಸಣ್ಣ ನೀರಾವರಿ ಇಲಾಖೆಯಡಿ ಪ್ರಾಯೋಗಿಕವಾಗಿ ಕೋಲಾರ ಜಿಲ್ಲೆ, ಕೋಲಾರ ತಾಲ್ಲೂಕು, ಕೆ.ಸಿವ್ಯಾಲಿ ಯೋಜನೆಯಿಂದ ನೀರು ತುಂಬಿಸುತ್ತಿರುವ ಸೋಮಂಬುದಿ ಅಗ್ರಹಾರ ಕೆರೆಯಲ್ಲಿ (ಎಸ್.ಅಗ್ರಹಾರ ಕೆರೆ) ಫ್ಲೋಟಿಂಗ್ ಸೋಲಾರ್ ಪವರ್ ಪ್ಲಾಂಟ್ ನಿರ್ಮಾಣ ಮಾಡಲು ವಿಸ್ತೃತ ಯೋಜನಾ ವರದಿಯನ್ನು (DPR) ತಯಾರಿಸುವ ಪ್ರಸ್ತಾವನೆಗೆ ಅನುಮೋದನೆ ನೀಡಲಾಗಿರುತ್ತದೆ. ಅದರಂತೆ, ಪ್ರಸ್ತುತ ಸದರಿ ಕಾಮಗಾರಿಗೆ ವಿಸ್ತೃತ ಯೋಜನಾ ವರದಿಯನ್ನು ತಯಾರಿಸಲು ಸಮಾಲೋಚಕರನ್ನು ನೇಮಿಸಲು ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. |
| ಆ | ಇದ್ದರೆ, ಸರ್ಕಾರ ಅದರ ಬಗ್ಗೆ ತೆಗೆದುಕೊಂಡಿರುವ ಕ್ರಮಗಳೇನು; | |
| ಇ | ಮೊದಲನೇ ಹಂತದಲ್ಲಿ ತೆಗೆದುಕೊಂಡಿರುವ ಜಿಲ್ಲೆಗಳ ಹಾಗೂ ತಾಲ್ಲೂಕುಗಳ ವಿವರಗಳನ್ನು ನೀಡುವುದು; | |
| | ಸದರಿ ಯೋಜನೆಯನ್ನು ಯಾವಾಗ ಪ್ರಾರಂಭ ಮಾಡಲಾಗುವುದು? | |

ಕಡತ ಸಂಖ್ಯೆ:MID/55/LCQ/2025

(ಎನ್.ಎಸ್. ಬೋಸರಾಜು)
ಸಣ್ಣ ನೀರಾವರಿ, ಹಾಗೂ ವಿಜ್ಞಾನ
ಮತ್ತು ತಂತ್ರಜ್ಞಾನ ಸಚಿವರು.